ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803

ಅಂತರ್ಜಾಲ: https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521**

ಕಂಪನಿ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009

**ಸಂಖ್ಯೆ: ಕವಿಪ್ರನಿನಿ/ಬಿ5/9635/2020-21** **ದಿನಾಂಕ: 16.08.2023**
18

ವ್ಯವಸ್ಥಾಪಕ ನಿರ್ದೇಶಕರು,
ಬೆವಿಸಕಂ/ ಮವಿಸಕಂ/ ಹುವಿಸಕಂ/ ಗುವಿಸಕಂ/ ಚಾವಿಸನಿನಿ,
ಬೆಂಗಳೂರು/ ಮಂಗಳೂರು/ ಹುಬ್ಬಳ್ಳಿ/ ಕಲಬುರಗಿ/ ಮೈಸೂರು.

ಮಾನ್ಯರೆ,

**ವಿಷಯ:** ಕವಿಪ್ರನಿನಿ ಮತ್ತು ವಿಸಕಂಗಳಲ್ಲಿ ಪ್ರತ್ಯೇಕವಾಗಿ ನೇಮಕ ಹೊಂದಿದ ಸಿಬ್ಬಂದಿಯ ಮುಂಬಡ್ತಿ ಪ್ರಕ್ರಿಯೆಗಳನ್ನು ತಡೆಹಿಡಿಯಲು ಸೂಚಿಸಿದ ಬಗ್ಗೆ.

**ಉಲ್ಲೇಖ:**
1. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ5/9635/2020-21 ದಿನಾಂಕ: 23.11.2022.
2. ದಿನಾಂಕ: 15.09.2022 ರಂದು ನಡೆದ 135 ನೇ ಕವಿಪ್ರನಿನಿ ನಿರ್ದೇಶಕರುಗಳ ಮಂಡಳಿ ಸಭೆಯ ಠರಾವು ಸಂಖ್ಯೆ: 135/10.
3. ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ.ಅ.), ಬೆವಿಸಕಂ ರವರಿಗೆ ಬರೆಯಲಾದ ನಿಗಮದ ಪತ್ರ ಸಂಖ್ಯೆ: ಕವಿಪ್ರನಿನಿ/ಬಿ5/18314/2015-16/05 ದಿನಾಂಕ: 31.05.2022.

-----

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:15.09.2022 ರಂದು ನಡೆದ 135ನೇ ಕವಿಪ್ರನಿನಿ ನಿರ್ದೇಶಕರುಗಳ ಮಂಡಳಿ ಸಭೆಯ ಠರಾವಿನಂತೆ, ನಿಗಮದ ಆದೇಶ ದಿನಾಂಕ: 23.11.2022 ರಲ್ಲಿ ಕವಿಪ್ರನಿನಿ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಂಪನಿವಾರು ಪ್ರತ್ಯೇಕವಾಗಿ ನೇಮಕಾತಿ ಹೊಂದಿರುವ ಸಿಬ್ಬಂದಿಯ ಸಾಮಾನ್ಯ ಜೇಷ್ಠತೆಯನ್ನು ನಿರ್ವಹಿಸುವ ಸಂದರ್ಭದಲ್ಲಿ ಅನುಸರಿಸಬೇಕಾದ ಮಾನದಂಡಗಳು, ಆಧಾರಗಳು ಹಾಗೂ ಸಿಬ್ಬಂದಿಯ ಸೇವಾ ಜೇಷ್ಠತೆಯನ್ನು ಸಾಮಾನ್ಯ ಜೇಷ್ಠತಾ ಪಟ್ಟಿಯಲ್ಲಿ ನಿಗಧಿಮಾಡುವಾಗ ಹಾಗೂ ಹಿಂದಿನ ಸೇವಾ ಜೇಷ್ಠತಾಪಟ್ಟಿಯೊಂದಿಗೆ ವಿಲೀನಗೊಳಿಸುವ ಕಾರ್ಯ ವಿಧಾನವನ್ನು ತಿಳಿಸುವ ಕರಡು ನಿಯಮಗಳನ್ನು ರೂಪಿಸಲು ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರ ಅಧ್ಯಕ್ಷತೆಯಲ್ಲಿ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳ ವ್ಯವಸ್ಥಾಪಕ ನಿರ್ದೇಶಕರುಗಳನ್ನು ಒಳಗೊಂಡ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯು ಈ ದಿಶೆಯಲ್ಲಿ ಕಾರ್ಯೋನ್ಮುಖವಾಗಿರುತ್ತದೆ.

ಮೇಲಿನ ಹಿನ್ನೆಲೆಯಲ್ಲಿ, ಸಾಮಾನ್ಯ ಜೇಷ್ಠತೆಯ ವಿಷಯವು ಇತ್ಯರ್ಥಗೊಳ್ಳುವವರೆಗೆ ಬೆವಿಸಕಂನಲ್ಲಿ ನೇರ ನೇಮಕಾತಿ ಹೊಂದಿರುವ ಅಧಿಕಾರಿ/ನೌಕರರಿಗೆ ಮುಂಬಡ್ತಿ ನೀಡುವ ಪ್ರಕ್ರಿಯೆಗಳನ್ನು ತಡೆಹಿಡಿಯಲು ಈಗಾಗಲೇ ಉಲ್ಲೇಖ-3 ರ ಪತ್ರದಲ್ಲಿ ಬೆವಿಸಕಂಗೆ ತಿಳಿಸಲಾಗಿದ್ದು, ಕವಿಪ್ರನಿನಿ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಪ್ರತ್ಯೇಕವಾಗಿ ನೇರ ನೇಮಕಾತಿ ಹೊಂದಿದ ಸಿಬ್ಬಂದಿಯ ಜೇಷ್ಠತೆಯನ್ನು ಹಿಂದಿನ ಕವಿಪ್ರನಿನಿಯ ಸಿಬ್ಬಂದಿಯ ಜೇಷ್ಠತೆಯೊಂದಿಗೆ ವಿಲೀನಗೊಳಿಸಿ, ಸಾಮಾನ್ಯ ಜೇಷ್ಠತೆಯನ್ನು ಅನುಷ್ಠಾನಗೊಳಿಸುವವರೆಗೆ, ಕವಿಪ್ರನಿನಿ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳ ಎಲ್ಲಾ ನೇಮಕಾತಿ ಮತ್ತು ಪದೋನ್ನತಿ ಪ್ರಾಧಿಕಾರಗಳು ಕವಿಪ್ರನಿನಿ ಹಾಗೂ ವಿಸಕಂಗಳಲ್ಲಿ ಪ್ರತ್ಯೇಕವಾಗಿ ನೇರ ನೇಮಕಾತಿ ಹೊಂದಿರುವ ಅಧಿಕಾರಿ/ನೌಕರರಿಗೆ ಮುಂಬಡ್ತಿ ನೀಡುವ ಪ್ರಕ್ರಿಯೆಗಳನ್ನು ತಡೆಹಿಡಿಯಲು ತಿಳಿಸುವಂತೆ ನಿರ್ದೇಶಿತನಾಗಿದ್ದೇನೆ.

"ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರಿಂದ ಅನುಮೋದಿಸಲ್ಪಟ್ಟಿದೆ"

ನಿಮ್ಮ ವಿಶ್ವಾಸಿ,

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),**
**ಕವಿಪ್ರನಿನಿ**
**ಹಾಗೂ ಸಮಿತಿಯ ಸದಸ್ಯ ಸಂಚಾಲಕರು**

## ಮೆಮೋ

**ಕ್ರಮಾಂಕ:ಸೆಸ್ಕ್/ಆ ಮತ್ತು ಮಾಸಂ/05/08/E- 81888/2023-24/** CYS-977 **ದಿನಾಂಕ:** 17 OCT 2023

ಕವಿಪ್ರನಿನಿ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಪ್ರತ್ಯೇಕವಾಗಿ ನೇರ ನೇಮಕಾತಿ ಹೊಂದಿದ ಸಿಬ್ಬಂದಿಯ ಜೇಷ್ಠತೆಯನ್ನು ಹಿಂದಿನ ಕವಿಪ್ರನಿನಿಯ ಸಿಬ್ಬಂದಿಯ ಜೇಷ್ಠತೆಯೊಂದಿಗೆ ವಿಲೀನಗೊಳಿಸಿ, ಸಾಮಾನ್ಯ ಜೇಷ್ಠತೆಯನ್ನು ಅನುಷ್ಠಾನಗೊಳಿಸುವವರೆಗೆ, ಕವಿಪ್ರನಿನಿ ಹಾಗೂ ವಿದ್ಯುತ್ ಸರಬರಾಜು ಕಂಪನಿಗಳ ಎಲ್ಲಾ ನೇಮಕಾತಿ ಮತ್ತು ಪದೋನ್ನತಿ ಪ್ರಾಧಿಕಾರಗಳು ಕವಿಪ್ರನಿನಿ ಹಾಗೂ ವಿಸಕಂಗಳಲ್ಲಿ ಪ್ರತ್ಯೇಕವಾಗಿ ನೇರ ನೇಮಕಾತಿ ಹೊಂದಿರುವ ಅಧಿಕಾರಿ/ನೌಕರರಿಗೆ ಮುಂಬಡ್ತಿ ನೀಡುವ ಪ್ರಕ್ರಿಯೆಗಳನ್ನು ತಡೆಹಿಡಿಯುವಂತೆ ನಿರ್ದೇಶಕರು (ಆಡಳತ ಮತ್ತು ಮಾ.ಸಂ) ಹಾಗೂ ಸಮಿತಿಯ ಸದಸ್ಯ ಸಂಚಾಲಕರು, ನಿಗಮ ಕಾರ್ಯಾಲಯ, ಕವಿಪ್ರನಿನಿ ಬೆಂಗಳೂರುರವರ ಪತ್ರ ಸಂಖ್ಯೆ: ಕವಿಪ್ರನಿನಿ/ಬಿ5/9635/2020-21 ದಿನಾಂಕ: 18.08.2023ನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ.)
ಚಾವಿಸನಿನಿ., ನಿಗಮ ಕಛೇರಿ, ಮೈಸೂರು.

ಪು.ತಿ.ನೋ..

**ಪ್ರತಿಗಳು:**

- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಹಾಸನ/ಮೈಸೂರು.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಕಂಪನಿ ಕಾರ್ಯದರ್ಶಿ, ನಿಗಮ ಕಛೇರಿ, ಚಾವಿಸನಿನಿ, ಮೈಸೂರು.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ/ಲೆಕ್ಕಾಧಿಕಾರಿ(ಆಂ.ಪ), ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ, ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ ನಿರ್ದೇಶಕರು(ಹಣಕಾಸು) ಇವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಪ್ರತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ನಿರ್ದೇಶಕರು(ಹಣಕಾಸು)ರವರ ಗಮನಕ್ಕೆ ತರುವಂತೆ ಕೋರಿದೆ.
- ಸ-2(ಆ ಮತ್ತು ಮಾ.ಸಂ)/ಪ್ರ.ಕ.

1 7